6.	ಪಶುವೈದ್ಯಕೀಯ ಸಹಾಯಕರು	01
7.	ವಾಹನ ಚಾಲಕರು	01
8.	ಡಿ–ದರ್ಜೆ ನೌಕರರು	24
	ಒಟ್ಟು	49

ಇ) 31

ವಿವರ ಈಕೆಳಗಿನಂತಿದೆ :

ಕ್ರಮ ಸಂಖ್ಯೆ	ಹುದ್ದೆ	ಖಾಲಿ ಇರುವ ಹುದ್ದೆ ಸಂಖ್ಯೆ
1.	ಪಶುವೈದ್ಯಾಧಿಕಾರಿ	8
2.	ಪಶುವೈದ್ಯಕೀಯ ಪರೀಕ್ಷಕರು	2
3.	ಪಶವೈದ್ಯಕೀಯ ಸಹಾಯಕರು	3
4.	ಡಿ–ದರ್ಜೆ ನೌಕರರು	18
	ಒಟ್ಟು	31

ಸದರಿ ಹುದ್ದೆಗಳು 3–4 ವರ್ಷಗಳಿಂದ ಖಾಲಿಯಿರುತ್ತವೆ.

ಈ) ಇಲ್ಲ. ಖಾಲಿಯಿರುವ ಹುದ್ದೆಗಳಿಗೆ ಪ್ರಭಾರ ವ್ಯವಸ್ಥೆ ಮಾಡುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ.

ಉ) ಉದ್ಭವಿಸುವುದಿಲ್ಲ.

ಊ) ಖಾಲಿ ಹುದ್ದೆಗಳನ್ನು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗುವುದು :–

ಪಶುವೈದ್ಯಾಧಿಕಾರಿ :– 276 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿಯಡಿ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ನೇಮಕಾತಿ ಸಂದರ್ಭದಲ್ಲಿ ಕುಂದಗೋಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಪಶುವೈದ್ಯಕೀಯ ಪರೀಕ್ಷಕ : ಪಶುವೈದ್ಯಕೀಯ ಸಹಾಯಕರ ಹುದ್ದೆಯಿಂದ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವ ಸಮಯದಲ್ಲಿ ಕುಂದಗೋಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಹಾಲಿ ಇರುವ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಪಶುವೈದ್ಯಕೀಯ ಸಹಾಯಕ : 642 ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮೂಲಕ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. ನೇಮಕಾತಿ ಸಂದರ್ಭದಲ್ಲಿ ಕುಂದಗೋಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಖಾಲಿ ಇರುವ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಾಹನ ಚಾಲಕ :– ಹೊರಗುತ್ತಿಗೆ ಆಧಾರದ ಮೇಲೆ ವಾಹನ ಚಾಲಕರನ್ನು ನೇಮಿಸಿಕೊಳ್ಳುವಾಗ ಹಾಗೂ 'ಡಿ' ದರ್ಜೆ ನೌಕರರಿಗೆ ವಾಹನ ಚಾಲಕರಾಗಿ ಮುಂಬಡ್ತಿ ನೀಡುವ ಸಮಯದಲ್ಲಿ ಕುಂದಗೋಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಯನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

ಕುಂದಗೋಳ ಮತಕ್ಷೇತ್ರಕ್ಕೆ ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ

846(1082) ಶ್ರೀ ಚಿಕ್ಕನಗೌಡ್ರ ಸಿದನಗೌಡ ಈಶ್ವರ ಗೌಡ (ಕುಂದಗೋಳ) : ಮಾನ್ಯ ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಧಾರವಾಡ ಜಿಲ್ಲೆಯ ಕುಂದಗೋಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಮುಜರಾಯಿ ಇಲಾಖೆ ಅಧೀನದಲ್ಲಿ ಬರುವ ದೇವಸ್ಥಾನಗಳಿಗೆ ಅನುದಾನ ಬಿಡುಗಡೆಗೆ ಹಲವಾರು ಬಾರಿ ಪತ್ರವನ್ನು ಬರೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;